ಅ) ಚಿಕ್ಕಬಳ್ಳಾಪುರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ 1989-90 ಮತ್ತು 1990-91ನೇ ಸಾಲಿಗೆ ಆಲ್ಕೋಹಾಲನ್ನು ಖರೀದಿಸಲು ಹಣವನ್ನು ತೆಗೆದುಕೊಳ್ಳಲಾಗಿದೆಯೇ?

ಆ) ಹಾಗಿದ್ದಲ್ಲಿ ಎಷ್ಟು ಆಲ್ಕೋಹಾಲನ್ನು ಖರೀದಿಸಲಾಗಿದೆ ಮತ್ತು ಈ ಸಲುವಾಗಿ ಎಷ್ಟು ಹಣವನ್ನು ಖರ್ಚುಮಾಡಲಾಗಿದೆ?.

ಶ್ರೀ ಎಂ. ವೀರಪ್ಪ ಮೊಯಿಲಿ(ಶಿಕ್ಷಣ ಸಚಿವರು):

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಸರ್ಕಾರಿ ವೈದ್ಯಕೀಯ ಮಹಾ ವಿದ್ಯಾಲಯ, ಬಳ್ಳಾರಿ. ಇಲ್ಲಿ ಪ್ರಾಂಶುಪಾಲರ ಹುದ್ದೆ ಖಾಲಿ ಇರುವುದರ ಬಗ್ಗೆ

1130 - ಶ್ರೀ ಎಂ. ರಾಮಪ್ಪ (ಬಳ್ಳಾರಿ) ; ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಸರ್ಕಾರಿ ವೈದ್ಯಕೀಯ ಮಹಾ ವಿದ್ಯಾಲಯ, ಬಳ್ಳಾರಿ ಇಲ್ಲಿ ಪ್ರಾಂಶುಪಾಲರ ಹುದ್ದೆ ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಈ ಹುದ್ದೆಯನ್ನು ತುಂಬಲು ಸರ್ಕಾರದವರು ಕೈಗೊಂಡ ಕ್ರಮವೇನು?

ಶ್ರೀಮತಿ ಕೆ.ಎಸ್. ನಾಗರತ್ನಮ್ಮ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ಹೌದು.

ಆ) ಪ್ರಾಂಶುಪಾಲರ ಹುದ್ದೆಯನ್ನು ಶೀಘ್ರವಾಗಿ ತುಂಬಲಾಗುವುದು.

ಬೆಳಗಾಂ ಜಿಲ್ಲೆಯ ಶಾಲಾ ಶಿಕ್ಷಕರ ನೇಮಕಾತಿಯಲ್ಲಿ ಅಭ್ಯರ್ಥಿಗಳಿಗೆ ಆದ ಅನ್ಯಾಯದ ಬಗ್ಗೆ

1198 - ಶ್ರೀ ಸಾದತ್ ಅಲಿ ಖಾನ್ (ಚನ್ನಪಟ್ಟಣ) ; ಮಾನ್ಯ ಶಿಕ್ಷಣ ಸಚಿವರು ಈ ಕಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾಂ ಜಿಲ್ಲೆಯ ಶಾಲಾ ಶಿಕ್ಷಕರ ನೇಮಕಾತಿಯಲ್ಲಿ ಅಭ್ಯರ್ಥಿಗಳಿಗೆ ಬಹಳ ಅನ್ಯಾಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಿಜಾಪುರ ಜಿಲ್ಲೆಗೆ ಸೇರಿದ ಅಭ್ಯರ್ಥಿಗಳನ್ನು ಬೆಳಗಾಂ ಜಿಲ್ಲೆಯ ಶಿಕ್ಷಕರ ಹುದ್ದೆಗಳಿಗೆ ನೇಮಕಾತಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಹಾಗಿದ್ದಲ್ಲಿ,ಜಿಲ್ಲೆಯ ಅಭ್ಯರ್ಥಿಗಳಿಗೆ ನೇಮಕಾತಿ ನೀಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು?

ಈ) ಉರ್ದು ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಮೀಸಲಿಡಲಾಗಿದೆಯೇ?

ಉ) ಹಾಗಿದ್ದಲ್ಲಿ, ಈ ಹುದ್ದೆಗಳನ್ನು ಸರ್ಕಾರವು 'ಸಿ' ಗುಂಪಿನ ಅಭ್ಯರ್ಥಿಗಳಿಂದ ತುಂಬುವುದೇ?

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಸಚಿವರು):

ಅ) ಈ ಬಗ್ಗೆ ಸರ್ಕಾರಕ್ಕೆ ದೂರುಗಳು ಬಂದಿರುತ್ತದೆ.

ಆ) ಹೌದು

ಇ) ನೋಂದಣಿ ನಿಯಮಗಳನ್ನು ಉಲ್ಲಂಘಿಸಿ ಬೆಳಗಾಂ ಜಿಲ್ಲೆಯ ಉದ್ಯೋಗ ವಿನಿಮಯ ಕೇಂದ್ರದಲ್ಲಿ ನೋಂದಾಯಿಸಿರುವ ಎಲ್ಲಾ ಅಭ್ಯರ್ಥಿಗಳ ಪ್ರಕರಣಗಳಲ್ಲಿ ಅಗತ್ಯ ಕ್ರಮ ಕೈಗೊಳ್ಳಲು ಸೂಚನೆಗಳನ್ನು ನೀಡಲಾಗಿದೆ. ಸಾಮಾನ್ಯವಾಗಿ ಬೆಳಗಾಂ ಜಿಲ್ಲೆಯಲ್ಲಿ ವಾಸಿಸುತ್ತಿರುವ ವ್ಯಕ್ತಿಗಳು ಮಾತ್ರ ಬೆಳಗಾಂ ಉದ್ಯೋಗ ವಿನಿಮಯ ಕೇಂದ್ರದಲ್ಲಿ ನೋಂದಾಯಿಸಬಹುದಾಗಿದೆ.

ಈ) ಹೌದು.

ಉ) ಪರಿಶಿಷ್ಟ ಜಾತಿ; ಪಂಗಡದ ಅಭ್ಯರ್ಥಿಗಳಿಗೆ ಮೀಸಲಿಟ್ಟಿರುವ ಸ್ಥಾನಗಳನ್ನು ಆಯಾ ಪಂಗಡಗಳಿಂದಲೇ ಭರ್ತಿ ಮಾಡಬೇಕಾಗುವುದು. ಒಂದು ವೇಳೆ ಪ್ರಸ್ತುತ ನಿಯಮಗಳ ಪ್ರಕಾರ ಪರಿಶಿಷ್ಟ ಜಾತಿ: ಪರಿಶಿಷ್ಟ ಪಂಗಡಗಳಿಗೆ ಮೀಸಲಿರುವ ಹುದ್ದೆಗಳಿಗೆ ಸದರಿ ಗುಂಪಿನ ಅಭ್ಯರ್ಥಿಗಳು ಲಭ್ಯವಿಲ್ಲದ ಕಾರಣ ಭರ್ತಿ ಮಾಡಲಾಗದಿದ್ದರೆ, ಅಂತಹ ಹುದ್ದೆಗಳನ್ನು ಉಳಿದು ಹೋದ ರಿಕ್ತ ಸ್ಥಾನಗಳೆಂದು ಪರಿಗಣಿಸಿ ಮುಂದಿನ ನೇಮಕಾತಿಗೆ ಸೇರಿಸಲಾಗುವುದು.

ಊ) ಪ್ರಸ್ತುತ ಈ ಹುದ್ದೆಗಳನ್ನು ಬೇರೆ ಗುಂಪಿನ ಅಭ್ಯರ್ಥಿಗಳಿಂದ ಭರ್ತಿ ಮಾಡಲು ಅವಕಾಶವಿರುವುದಿಲ್ಲ.

ತರಬೇತಿ ಪಡೆದ ನರ್ಸರಿ ಶಿಕ್ಷಕಿಯರ ಸಂಖ್ಯೆ

501 - ಶ್ರೀ ಸಾದತ್ ಅಲಿ ಖಾನ್ (ಚನ್ನಪಟ್ಟಣ) : ಮಾನ್ಯ ಶಿಕ್ಷಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಕೆಲಸ ಮಾಡುತ್ತಿರುವ ತರಬೇತಿ ಪಡೆದ ನರ್ಸರಿ ಶಿಕ್ಷಕಿಯರ ಸಂಖ್ಯೆ ಎಷ್ಟು?

ಆ) ಪೂರ್ವ ಪ್ರಾಥಮಿಕ ಶಾಲೆಯಲ್ಲಿ ಕೆಲಸ ಮಾಡುತ್ತಿರುವ ತರಬೇತಿ ಪಡೆದ ನರ್ಸರಿ ಶಿಕ್ಷಕಿಯರ ಸೇವೆಯನ್ನು ಖಾಯಂಗೊಳಿಸಲು ಸರ್ಕಾರಿ ಕೈಗೊಂಡ ಕ್ರಮ ಏನು?

ಇ) 1991-92ನೇ ಸಾಲಿನಲ್ಲಿ ಚನ್ನಪಟ್ಟಣ ತಾಲ್ಲೂಕಿನಲ್ಲಿ ಹೆಚ್ಚುವರಿ ಪ್ರೌಢಶಾಲೆ ಪ್ರಾರಂಭಿಸಲು ಪ್ರಸ್ತಾವನೆ ಇದೆಯೇ?

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಸಚಿವರು) :

ಅ) 2459

ಆ) ಜಿಲ್ಲಾ ಆಯ್ಕೆ ಸಮಿತಿ ಮೂಲಕ ನೇಮಕವಾದ ಶಿಕ್ಷಕರ 2 ವರ್ಷದ ಅರ್ಹತಾ ಪರೀಕ್ಷಾರ್ಥ ಸೇವೆಯ ನಂತರ ನಿಯಂತ್ರಣ ಅಧಿಕಾರಿಯು ಬರೆದ 2 ವರ್ಷದ ರಹಸ್ಯ ವರದಿಗಳ ಆಧಾರದ ಮೇಲೆ ನೇಮಕಾತಿ ಅಧಿಕಾರಿಯಾದ ಉಪ ನಿರ್ದೇಶಕರು ಸದರಿ ಉಪಾಧ್ಯಾಯರ ಸೇವೆಯು ತೃಪ್ತಿಕರವಾಗಿದ್ದಲ್ಲಿ ಅವರ ಸೇವೆಯನ್ನು ಸ್ಥಿರೀಕರಣಗೊಳಿಸುತ್ತಾರೆ.

ಇ) ಚನ್ನಪಟ್ಟಣ ತಾಲ್ಲೂಕಿನಲ್ಲಿ 1991-92 ರಲ್ಲಿ ಪ್ರೌಢ ಶಾಲೆಯನ್ನು ತೆರೆಯಲು ಪ್ರಸ್ತಾವನೆಗಳು ಬಂದಿವೆ.

ಪ್ರಶ್ನೆ ಪತ್ರಿಕೆಗಳು ಪರೀಕ್ಷೆಯ ಮುಂಚೆ ಬಯಲಾಗಿರುವುದರ ಬಗ್ಗೆ

1150 - ಶ್ರೀ ಸಾದತ್ ಅಲಿಖಾನ್ (ಚನ್ನಪಟ್ಟಣ) : ಮಾನ್ಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?